**ಕರ್ನಾಟಕ ಸರ್ಕಾರ**

ಸಂಖ್ಯೆ:ಗ್ರಾಅಪ 487 ಗ್ರಾಪಂಅ 2017

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:10-11-2017

**ಇಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
ಬೆಂಗಳೂರು.

**ಇವರಿಗೆ:**

ಎಲ್ಲಾ ಜಿಲ್ಲಾ ಪಂಚಾಯತ್‌ಗಳ
ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳು

ಮಾನ್ಯರೆ,

**ವಿಷಯ:** ಮಕ್ಕಳ ಹಕ್ಕುಗಳ ಗ್ರಾಮಸಭೆಗಳನ್ನು ಪರಿಣಾಮಕಾರಿಯಾಗಿ ಆಯೋಜಿಸಲು ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವ ಕುರಿತು.

ಉಲ್ಲೇಖ:
1. ಸಿಎಮ್‌ಸಿಎ ಸಂಸ್ಥೆ, ಬೆಂಗಳೂರು ರವರ ಪತ್ರದ ದಿನಾಂಕ: 08-11-2017.
2. ಅಧ್ಯಕ್ಷರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು ರವರ ಪತ್ರದ ಸಂಖ್ಯೆ:ಮಹಗ್ರಾಸ/2017-18/760 ದಿನಾಂಕ: 02-11-2017.
3. ಸರ್ಕಾರದ ಇದೇ ಸಮ ಸಂಖ್ಯೆಯ ಸುತ್ತೋಲೆಯ ದಿನಾಂಕ: 29-08-2017.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (2) ರಲ್ಲಿ ಅಧ್ಯಕ್ಷರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು ರವರು ಮಕ್ಕಳ ಹಕ್ಕುಗಳ ಬಗ್ಗೆ ಅವರಿಗೆ ದೊರಕುವ ಸೌಲಭ್ಯಗಳು ಮತ್ತು ಕುಂದುಕೊರತೆಗಳ ಬಗ್ಗೆ ಗ್ರಾಮ ಮಟ್ಟದಲ್ಲಿ ಮುಕ್ತವಾಗಿ ಚರ್ಚಿಸಿ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಗ್ರಾಮ ಸಭೆಗಳನ್ನು ಆಯೋಜಿಸುವುದು ಮುಖ್ಯ ಉದ್ದೇಶವಾಗಿರುತ್ತದೆ. ಆದರೆ ನೆಪ ಮಾತ್ರಕ್ಕಾಗಿ ಗ್ರಾಮ ಸಭೆಗಳನ್ನು ಆಯೋಜಿಸುತ್ತಿದ್ದು, ಸಭೆಗಳಲ್ಲಿ ಸ್ಥಳೀಯ ರಾಜಕಾರಣಿಗಳು ಮತ್ತು ಇತರೆ ಮುಖಂಡರುಗಳು ಭಾಗವಹಿಸಿ ಅವರು ಮಾತನಾಡುವದಕ್ಕೆ ಮಾತ್ರ ಸೀಮಿತವಾಗಿ, ಮಕ್ಕಳು ಸದರಿ ಗ್ರಾಮ ಸಭೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ತಮ್ಮ ಸಮಸ್ಯೆಗಳ ಕುರಿತು ಮಾತನಾಡಲು ಮತ್ತು ತಮ್ಮ ಹಕ್ಕುಗಳನ್ನು ಚಲಾಯಿಸಲು ಸಾಧ್ಯವಾಗುತ್ತಿಲ್ಲದಿರುವುದು ಆಯೋಗದ ಗಮನಕ್ಕೆ ಬಂದಿದ್ದು, ರಾಜ್ಯದ ಎಲ್ಲಾ ಗ್ರಾಮ ಪಂಚಾಯ್ತಿಗಳಲ್ಲಿ ಕಡ್ಡಾಯವಾಗಿ ಮತ್ತು ಪರಿಣಾಮಕಾರಿಯಾಗಿ ಮಕ್ಕಳ ಹಕ್ಕುಗಳ ಗ್ರಾಮ ಸಭೆಯನ್ನು ಆಯೋಜಿಸಲು ಕೋರಿರುತ್ತಾರೆ.

ಉಲ್ಲೇಖ (1) ರಲ್ಲಿ ಸಿಎಮ್‌ಸಿಎ ಸಂಸ್ಥೆಯು ಮಕ್ಕಳ ಗ್ರಾಮ ಸಭೆಗಳನ್ನು ರಾಜ್ಯದಲ್ಲಿ ಇನ್ನಷ್ಟು ಪರಿಣಾಮಕಾರಿಯಾಗಿ ನಡೆಸಲು ಗ್ರಾಮ ಸಭೆ ನಡೆಸುವುದಕ್ಕೆ ಮುಂಚಿತವಾಗಿ ಎಲ್ಲಾ ಶಾಲೆಗಳಲ್ಲಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಡಂಗುರ ಹೊಡೆಸುವ ಹಾಗೂ ಕರಪತ್ರಗಳನ್ನು ಹಂಚುವ ಮೂಲಕ ಪ್ರಚಾರ ಮಾಡಲು ಮತ್ತು ಗ್ರಾಮ ಸಭೆಗಳಲ್ಲಿ ಮಕ್ಕಳು ಎತ್ತಿದ ಸಮಸ್ಯೆಗಳನ್ನು ಕ್ರಿಯಾಯೋಜನೆಯಲ್ಲಿ ಸೇರಿಸಿಕೊಂಡು ಕಾಲ ಮಿತಿಯೊಳಗೆ ಬಗೆಹರಿಸಲು ಕ್ರಮ ಕೈಗೊಳ್ಳಬೇಕೆಂಬ ಸಲಹೆಗಳನ್ನು ನೀಡಿದ್ದು ಅದರಂತೆ ಕ್ರಮ ವಹಿಸುವುದು.

ಈಗಾಗಲೆ ಹೊರಡಿಸಲಾಗಿರುವ ಉಲ್ಲೇಖ (3)ರ ಸುತ್ತೋಲೆಯಲ್ಲಿ ಪ್ರತಿ ವರ್ಷ ನವೆಂಬರ್ ತಿಂಗಳಲ್ಲಿ ಮಕ್ಕಳ ಗ್ರಾಮ ಸಭೆ ಏರ್ಪಡಿಸಿ, ಸದರಿ ಗ್ರಾಮ ಸಭೆಯಲ್ಲಿ ವಿಶೇಷವಾಗಿ ಚರ್ಚಿಸಬೇಕಾದ ಅಂಶಗಳ ಬಗ್ಗೆ ವಿವರವಾಗಿ ತಿಳಿಸಲಾಗಿದೆ. ಸದರಿ ಸುತ್ತೋಲೆಯಂತೆ 2017-18ನೇ ಸಾಲಿನ ನವೆಂಬರ್ ತಿಂಗಳಲ್ಲಿ ಕಡ್ಡಾಯವಾಗಿ ಮಕ್ಕಳ ಹಕ್ಕುಗಳ ಗ್ರಾಮ ಸಭೆಯನ್ನು ಆಯೋಜಿಸುವಂತೆ ಕಾರ್ಯನಿರ್ವಹಣಾಧಿಕಾರಿಗಳಿಗೆ, ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳಿಗೆ ಮತ್ತು ಕಾರ್ಯದರ್ಶಿಗಳಿಗೆ ಸೂಕ್ತ ನಿರ್ದೇಶನ ನೀಡಲು ಮತ್ತು ಗ್ರಾಮ ಸಭೆಯ ನಡಾವಳಿ ಮತ್ತು ಈ ಪತ್ರನೊಂದಿಗೆ ಲಗತ್ತಿಸಲಾಗಿರುವ ನಮೂನೆಯನ್ನು ಭರ್ತಿ ಮಾಡಿ ಅಧ್ಯಕ್ಷರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು ರವರಿಗೆ ಕಳುಹಿಸಿ ಅದರ ಪ್ರತಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿ ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ:**

1) ಎಲ್ಲಾ ತಾಲ್ಲೂಕು ಪಂಚಾಯ್ತಿಗಳ ಕಾರ್ಯನಿರ್ವಹಾಧಿಕಾರಿಗಳು.

2) ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.